RNU AIR DHARWAD

# MARCH 20,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಅಂತಾರಾಜ್ಯ ಜಲ ವಿವಾದಗಳನ್ನು ಬಗೆ ಹರಿಸಲು, ಸುಪ್ರೀಂ ಕೋರ್ಟ್ ನ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ, ದೇಶಾದ್ಯಂತ ಒಂದೇ ನ್ಯಾಯ ಮಂಡಳಿ ಸ್ಥಾಪನೆ ಮಾಡಬೇಕು, ಆರು ತಿಂಗಳಲ್ಲಿ ಜಲವಿವಾದಗಳನ್ನು ಇತ್ಯರ್ಥ ಪಡಿಸಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಕೇಂದ್ರ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ. ಸಂಸತ್ತಿನಲ್ಲಿ ಜಲಶಕ್ತಿ ಇಲಾಖೆಯ ಬೇಡಿಕೆ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಕೃ ಷ್ಣಾ ಮೇಲ್ದಂಡೆ ಯೋಜನೆಯಲ್ಲಿ ಕರ್ನಾಟಕವು ಮಧ್ಯಂತರ ರಾಜ್ಯವಾಗಿದೆ. 2010 ರಲ್ಲಿ ಕೃ ಷ್ಣಾ ನ್ಯಾಯಮಂಡಳಿ ಆದೇಶ ನೀಡಲಾಗಿದೆ. 15 ವರ್ಷ ಕಳೆದರೂ ನೋಟಿಫಿಕೇಶನ್ ಆಗಿಲ್ಲ ಎಂದರು. ಅಲಮಟ್ಟಿ ಜಲಾಶಯದ ಎತ್ತರವನ್ನು 524 ಮೀಟರ್ ಗೆ ಹೆಚ್ಚಳ ಮಾಡುವುದು ನಮ್ಮ ಪ್ರಸ್ತಾವನೆ ಅಲ್ಲ, ಅದು ನಮ್ಮ ಹಕ್ಕು, ಬೆಡ್ತಿ–ವರದಾ ನದಿ ಜೋಡಣೆ ಯೋಜನೆ ಬಗ್ಗೆ ಪ್ರಸ್ತಾಪಿಸಿದ ಅವರು ಯೋಜನೆಯನ್ನು ಶೀಘ್ರದಲ್ಲಿಯೇ ಜಾರಿಗೊಳಿಸಬೇಕಿದೆ ಎಂದರು**

<><><>

**ಪ್ರಾಥಮಿಕ ಶಿಕ್ಷಣದಿಂದ ಹಿಡಿದು ಸ್ನಾತಕೋತ್ತರ ಶಿಕ್ಷಣದವರೆಗೆ ಶೈಕ್ಷಣಿಕ ವ್ಯವಸ್ಥೆಯನ್ನು ಬಲಪಡಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಕೊಪ್ಪಳ ವಿಶ್ವವಿದ್ಯಾಲಯದ ಉಪ ಕುಲಪತಿ ಪ್ರೊಫೆಸರ್ ಬಿ.ಕೆ ರವಿ ಹೇಳಿದರು. ನಗರದ ಸಾಹಿತ್ಯ ಭವನದಲ್ಲಿ ಜರುಗಿದ ಕೊಪ್ಪಳ ವಿಶ್ವವಿದ್ಯಾಲಯದ ದ್ವಿತೀಯ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಶಿಕ್ಷಣದ ಮೂಲಕ ಮಹಿಳಾ ಸಬಲೀಕರಣವೂ ಸಾಧ್ಯವಿದ್ದು, ಅದಕ್ಕೆ ಹೆಚ್ಚಿನ ಒತ್ತು ನೀಡಬೇಕಿದೆ ಎಂದರು.**

<><><>

**ಬೈಟ್: ಬಿ.ಕೆ ರವಿ 35 ಸೆಕೆಂದುಗಳು**

<><><>

**ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಹಿರಿಯ ಸಾಹಿತಿ ಹಾಗೂ ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಅಧ್ಯಕ್ಷ ಕಾ. ತ ಚಿಕ್ಕಣ್ಣ, ವೃತ್ತಿ ಕೌಶಲ್ಯವು ಜೀವನ ರೂಪಿಸುತ್ತದೆ, ಉನ್ನತ ಶಿಕ್ಷಣದಲ್ಲಿ ಕೌಶಲ್ಯ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದರು. ಪದ್ಮಶ್ರೀ ಪ್ರಶಸ್ತಿ ವಿಜೇತ, ಹಿರಿಯ ಜಾನಪದ**

ಹಾಡುಗಾರ್ತಿ ಭೀಮವ್ವ ಸಿಳ್ಳೆಕ್ಯಾತರ  ಅವರಿಗೆ ಕೊಪ್ಪಳ ವಿಶ್ವವಿದ್ಯಾಲಯದ ವತಿಯಿಂದ ವಿಶೇಷ ಸನ್ಮಾನ ಪ್ರದಾನಿಸಿ, ಗೌರವಿಸಲಾಯಿತು.

<><><>

ಸರಕು ಸಾಗಣೆ ಕ್ಷೇತ್ರದಲ್ಲಿ ಎಲೆಕ್ಟ್ರಿಕ್ ವಾಹನಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಅಳವಡಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಇದಕ್ಕೆ ಪೂರಕವಾಗಿ ಹಲವು ಉಪಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು. ನವದೆಹಲಿಯಲ್ಲಿ ಎಲೆಕ್ಟ್ರಿಕ್ ಟ್ರಕ್ ಉದ್ಯಮದ ಮುಖ್ಯಸ್ಥರ ಜತೆ ಸಂವಾದ ನಡೆಸಿದ ಸಚಿವರು; ಸರಕು ಸಾಗಣೆಯ ಕ್ಷೇತ್ರದಲ್ಲಿ ವಾಯು ಮಾಲಿನ್ಯ ಕಡಿಮೆ ಮಾಡಿ ಸಾಗಾಣಿಕೆಯಲ್ಲಿ ಕ್ಷಮತೆ ಸಾಧಿಸುವ ಉದ್ದೇಶದಿಂದ ಕೇಂದ್ರ ಎಲ್ಲ ರೀತಿಯ ಉತ್ತೇಜನ ನೀಡುತ್ತಿದೆ ಎಂದರು. ಭಾರತವು ಎಲೆಕ್ಟ್ರಿಕ್ ವಾಹನ ವಲಯದಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದೆ. 27,000 ಎಲೆಕ್ಟ್ರಿಕ್ ಬಸ್‌ಗಳ ನಿಯೋಜನೆಗೆ ಒಪ್ಪಂದ ಮಾಡಿಕೊಳ್ಳಲಾಗಿದ್ದು, ಈಗಾಗಲೇ 10,500ಕ್ಕೂ ಹೆಚ್ಚು ಬಸ್ ಗಳು ಕಾರ್ಯನಿರ್ವಹಿಸುತ್ತಿವೆ ಎಂದರು.

<><><>

ವಿದ್ಯಾರ್ಥಿಗಳು ಹಾಗೂ ನಗರ ಮತ್ತು ಗ್ರಾಮೀಣ ಪ್ರದೇಶದ ಅಂಚಿನಲ್ಲಿರುವ ಸಮುದಾಯಗಳ ಯುವಜನರಿಗೆ ಕೃತಕ ಬುದ್ಧಿಮತ್ತೆ, ಇಂಟರ್ನೆಟ್ ಆಫ್ ಥಿಂಗ್ಸ್, ಡೇಟಾ ವಿಶ್ಲೇಷಣೆ ಹಾಗೂ ಎಲೆಕ್ಟ್ರಾನಿಕ್ಸ್ ಕ್ಷೇತ್ರದಲ್ಲಿ ಕೌಶಲ್ಯ ತರಬೇತಿ ನೀಡುವ ನಿಟ್ಟಿನಲ್ಲಿ ವಿಶೇಷ ತಿಳಿವಳಿಕಾ ಒಪ್ಪಂದಕ್ಕೆ ವಿಕಾಸಸೌಧದಲ್ಲಿ, ವೈದ್ಯಕೀಯ ಶಿಕ್ಷಣ, ಕೌಶಲಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾಕ್ಟರ್ ಶರಣ ಪ್ರಕಾಶ ಪಾಟೀಲ್ ಸಮ್ಮುಖದಲ್ಲಿ ಸಹಿ ಹಾಕಲಾಯಿತು.  ಬೆಂಗಳೂರಿನ ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ) ಹಾಗೂ ರಾಷ್ಟ್ರೀಯ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಂಸ್ಥೆ (ನೀಲಿಟ್) ಕೌಶಲ್ಯ ತರಬೇತಿ ನೀಡಲಿವೆ. ನೂತನ ಉಪಕ್ರಮವು ವಿದ್ಯಾರ್ಥಿಗಳಿಗೆ ಹೊಸ ಉದ್ಯೋಗಾವಕಾಶಗಳನ್ನು ಹೆಚ್ಚಿಸಿ, ಉದ್ಯೋಗ ಸಿದ್ಧ ಕಾರ್ಯಪಡೆಯನ್ನು ಖಚಿತಪಡಿಸಲಿದೆ.

<><><>

ಹೆಚ್ಚಿನ ಕನ್ನಡಪತ್ರಿಕೆಗಳ ಪ್ರಸಾರ ಹೊಂದಿರುವ ಕಾಸರಗೋಡಿನಲ್ಲಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು (ಕೆಯುಡಬ್ಲ್ಯೂಜೆ), ಹೊರನಾಡು ಘಟಕವಾಗಿರುವ ಕಾಸರಗೋಡು ಪತ್ರಕರ್ತರ ಸಂಘದ ಕ್ಷೇಮಾಭಿವೃದ್ಧಿ ನಿಧಿಗೆ 25 ಲಕ್ಷ ರೂಪಾಯಿ ಮಂಜೂರು ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಗೃಹ ಕಚೇರಿ ಕಾವೇರಿಯಲ್ಲಿ, ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹಾಗೂ ಕಾಸರಗೋಡು ಘಟಕದ ಅಧ್ಯಕ್ಷ ಎ.ಆರ್ ಸುಬ್ಬಯ್ಯಕಟ್ಟೆ ನೇತೃತ್ವದಲ್ಲಿ ಅಭಿನಂದನೆ ಸಲ್ಲಿಸಲಾಯಿತು.

<><><>

ಚಿಕ್ಕಬಳ್ಳಾಪುರ ಜಿಲ್ಲೆ ವ್ಯಾಪ್ತಿಯ ವಾಹನ ಸವಾರರು ವಾಹನ ಚಾಲನೆ ವೇಳೆ ಮೊಬೈಲ್ ಬಳಸದೆ ಸುರಕ್ಷಿತ ಚಾಲನೆಗೆ ಒತ್ತು ನೀಡಬೇಕೆಂದು ಜಿಲ್ಲಾ ಪೊಲೀಸ್ ವರಿ  ಷ್ಠಾಧಿಕಾರಿ ಕುಶಲ್ ಚೌಕ್ಸೆ ತಿಳಿಸಿದ್ದಾರೆ. ವಾಹನ ಚಾಲನೆ ಮಾಡುವಾಗ ಮೊಬೈಲ್ ಬಳಕೆ ಕಾನೂನು ಬಾಹಿರ ಹಾಗೂ  ದಂಡಾರ್ಹವಾಗಿದೆ. ಚಾಲನಾ ಸಂದರ್ಭದಲ್ಲಿ ಮೊಬೈಲ್ ಬಳಸುವ ದ್ವಿಚಕ್ರ  ಮತ್ತು ತ್ರಿಚಕ್ರ ವಾಹನ ಸವಾರರಿಗೆ 1 ಸಾವಿರದ 500, ಲಘು ಮೋಟಾರು ವಾಹನಗಳಿಗೆ 3 ಸಾವಿರ ಹಾಗೂ ಇತರೆ ವಾಹನಗಳಿಗೆ 5 ಸಾವಿರ ರೂಪಾಯಿ ದಂಡ ವಿಧಿಸಲಾಗುವುದು ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>